ಅ) ಕಾವೇರಿ ೩ನೇ ಹಂತ ಯೋಜನೆಯಲ್ಲಿ ಕನಕಪುರ ಹಾಗೂ ಸಾತನೂರಿಗೆ ಕುಡಿಯುವ ನೀರಿನ ಸೌಕರ್ಯವನ್ನು ಒದಗಿಸಲು ಸರ್ಕಾರದವರು ಕ್ರಮ ಕೈಗೊಂಡಿದ್ದಾರೆಯೇ?

ಆ) ಹಾಗಿದ್ದಲ್ಲಿ ಈ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಅದರ ಅಂದಾಜು ವೆಚ್ಚ ಎಷ್ಟು?

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಸಚಿವರು):

ಅ) ಕಾವೇರಿ ೩ನೇ ಹಂತದ ಯೋಜನೆಯಲ್ಲಿ ಬೆಂಗಳೂರು ನಗರಕ್ಕೆ ನೀರು ಸರಬರಾಜು ಮಾಡಲು ಅಳವಡಿಸಿರುವ ೧೭೫೦ ಮಿ.ಮೀ. ವ್ಯಾಸದ ಕೊಳವೆಯನ್ನು ಸಂಪರ್ಕಿಸಿ, ಕನಕಪುರಪಟ್ಟಣಕ್ಕೆ ನೀರು ಸರಬರಾಜು ಮಾಡುವ ಯೋಜನೆಗೆ ಸರ್ಕಾರವು ತಾತ್ವಿಕೆ ಅನುಮೋದನೆ ನೀಡಿದೆ.

ಆ) ಪುರಸಭೆಯ ವಂತಿಕೆಯ ೩೬.೭೫ ಲಕ್ಷರೂ.ಗಳ ೧/೩ ಭಾಗವನ್ನು ಮಂಡಲಿಗೆ ಪುರಸಭೆಯವರು ಠೇವಣಿ ಮಾಡಿದ ಕೂಡಲೇ ಸರ್ಕಾರಕ್ಕೆ ಅಂದಾಜನ್ನು ಸಲ್ಲಿಸಿ ಆಡಳಿತಾತ್ಮಕ ಅನುಮೋದನೆಯನ್ನು ಪಡೆದು ಈ ಕೆಲಸವನ್ನು ಪ್ರಾರಂಭಿಸಲಾಗುವುದು. ಇದರ ಅಂದಾಜು ವೆಚ್ಚ ರೂ. ೨೪೫.೦೦ ಲಕ್ಷಗಳು.

ಪರಿಸರಾಸಕ್ತರ ಆಂಧೋಲನದ ಬಗ್ಗೆ

೧೪೮೨-ಶ್ರೀ ಕೆ.ಪ್ರತಾಪ್ ಚಂದ್ರಶೆಟ್ಟಿ (ಕುಂದಾಪುರ) ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ರಾಜ್ಯ ಸಚಿವರು. ಈ ಕೆಳಕಂಡ ಪಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಸರ ಮಾಲಿನ್ಯವನ್ನು ತಡೆಯಲು ಪರಿಸರಾಸಕ್ತರು ಆಂದೋಲನ ಮಾಡುವ ಹಿನ್ನಲೆ ಏನು,

ಆ) ಪರಿಸರ ಮಾಲಿನ್ಯ ತಡೆಯಲು ಹಾಗೂ ಜನಜಾಗೃತಿ ಬಗ್ಗೆ ಸರ್ಕಾರದವರು ತೆಗೆದುಕೊಳ್ಳುವ ಕ್ರಮವೇನು?

ಶ್ರೀ ಪಿ.ಸಿ. ಸಿದ್ದನಗೌಡರು (ಸಕ್ಕರೆ, ಜವಳಿ, ವಿಜ್ಞಾನ ಮತ್ತು ಯಂತ್ರಕಲೆ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ರಾಜ್ಯ ಸಚಿವರು).

ಅ) ೧. ಹೊಸದಾಗಿ ಸ್ಥಾಪಿಸಲು ಉದ್ದೇಶಿಸಿರುವ ಕೈಗಾರಿಕೆಗಳು ಮತ್ತುಬೃಹತ್ ಯೋಜನೆಗಳಿಂದ ಉಂಟಾಗಬಹುದಾದ ಮಾಲಿನ್ಯದಿಂದ ಜನರ ಮತ್ತು ಜಲಚರಗಳ ಮೇಲೆ ದುಷ್ಪರಿಣಾಮ ಉಂಟಾಗಬಹುದೆಂಬ ಶಂಕೆ.

೨. ವಿದ್ಯುತ್, ನೀರಾವರಿ ಮುಂತಾದ ಬೃಹತ್ ಯೋಜನೆಗಳಿಂದ ಕಾಡುನಾಶವಾಗಿ ಪರಿಸರ ಅಸಮತೋಲ ಉಂಟಾಗಬಹುದೆಂಬ ಶಂಕೆ.

೩. ಸ್ಥಳೀಯ ಮತ್ತು ವೈಯಕ್ತಿಕ ಕಾರಣಗಳಿಂದಲೂ ಹೊಸ ಕಾರ್ಖಾನೆಗಳನ್ನು,ಸರ್ಕಾರಿ ಯೋಜನೆಗಳನ್ನು ವಿರೋಧಿಸಿ ಆಂದೋಲನ ನಡೆಸುವ ಸಂಭವ ಇದೆ.

ಆ) ೧. ಪ್ರಚಾರ ಮಾಧ್ಯಮಗಳ ಮೂಲಕ ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣದ ಬಗ್ಗೆ ಜನರಿಗೆ ತಿಳುವಳಿಕೆ ನೀಡಲಾಗುತ್ತದೆ.

೨. ವಿಶ್ವ ಪರಿಸರ ದಿನಾಚರಣೆಯ ಆಚರಣೆಯ ಮೂಲಕ ಜನತೆಗೆ ವಿಶೇಷವಾಗಿ ಮಕ್ಕಳಿಗೆ ಪರಿಸರ ಸಂರಕ್ಷಣೆ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗುತ್ತಿದೆ.

೩. ಹೊಸ ಕೈಗಾರಿಕೆಗಳನ್ನು ಸ್ಥಾಪಿಸುವಾಗ ಅವುಗಳಿಂದ ಪರಿಸರ ಮಾಲಿನ್ಯ ಉಂಟಾಗದಂತೆ ನಿಭಂದನೆಗಳನ್ನು ಷರತ್ತುಗಳನ್ನು ವಿಧಿಸಲಾಗುತ್ತಿದೆ.

೪. ಪರಿಸರ ಸಂರಕ್ಷಣೆಯನ್ನು ಗಮನದಲ್ಲಿರಿಸಿಕೊಂಡು ಕೆಲವು ಪ್ರದೇಶಗಳಲ್ಲಿ ಮಾಲಿನ್ಯ ಉಂಟು ಮಾಡುವ ಕೈಗಾರಿಕೆಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗುತ್ತಿಲ್ಲ. ನಿಯಮಗಳನ್ನು ಮತ್ತುಷರತ್ತುಗಳನ್ನು ಉಲ್ಲಂಘಿಸಿ ಕಲುಷಿತ ವಸ್ತುಗಳನ್ನು ಹೊರ ಹಾಕುವ ಮೂಲಕ ಪರಿಸರ ಮಾಲಿನ್ಯ ಉಂಟು ಮಾಡುವ ಕೈಗಾರಿಕೆಗಳ ವಿರುದ್ಧ ಪ್ರತಿಬಂಧಕ ಆಜ್ಞೆಗಳನ್ನು ಹೊರಡಿಸಲಾಗಿದೆ. ಕೆಲವು ಕೈಗಾರಿಕೆಗಳನ್ನು ಮುಚ್ಚಲು ಆದೇಶ ನೀಡಲಾಗಿದೆ. ಕೆಲವು ಕೈಗಾರಿಕೆಗಳ ವಿರುದ್ಧ ಕ್ರಿಮಿನಲ್ ಖಟ್ಲೆಗಳನ್ನು ಹೂಡಲಾಗಿದೆ.

ಪ್ರತ್ಯೇಕ ನಗರ ಯೋಜನಾ ಪ್ರಾಧಿಕಾರಗಳ ರಚನೆ

೭೧೦-ಶ್ರೀ ದಿ.ಆರ್ ಪಾಟೀಲ (ಗದಗ) ಮಾನ್ಯ ನಗರಾಭಿವೃದ್ಧಿ ಕಾಡಾ ಹಾಗೂ ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಇಲ್ಲಿನ ಸಂವಿಧಾನದ ತಿದ್ದುಪಡಿ ಪ್ರಕಾರ ಪುರಸಭೆ, ನಗರಸಭೆ,, ಹಾಗೂ ಮಹಾನಗರ ಪಾಲಿಕೆಗಳಿಗೆ ನಗರ ಯೋಜನೆ ಜವಾಬ್ದಾರಿ ನೀಡಲಾಗಿದೆಯೇ? ಈ ಹಿನ್ನಲೆಯಲ್ಲಿ ಪ್ರತ್ಯೇಕ ಯೋಜನಾ ಪ್ರಾಧಿಕಾರಿಗಳನ್ನು ರಚಿಸುವ ಅವಶ್ಯಕತೆ ಇದೆಯೇ?*

ಆ) *ಈಗಿರುವ ನಗರ ಯೋಜನಾ ಪ್ರಾಧಿಕಾರಗಳನ್ನು ನಗರಸಭೆ ಅಡಳಿತದ ಅಂಗ ಸಂಸ್ಥೆಗಳನ್ನಾಗಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ?*

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಕಾಡಾ ಮತ್ತು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು).

ಅ) ಇಲ್ಲ. ಆದರೆ, ಎಲ್ಲೆಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ರಚಿಸಲಾಗಿಲ್ಲವೋ ಅಂತಹ ಸ್ಥಳಗಳಲ್ಲಿ ಪುರಸಭೆ: ನಗರಸಭೆಗಳು ನಗರ ಯೋಜನಾ ಕಾರ್ಯವನ್ನು ನಿರ್ವಹಿಸುವ ಜವಾಬ್ದಾರಿಯನ್ನು ಹೊಂದಿರುತ್ತವೆ.

ಆ) ಇಲ್ಲ.